Fax: 08282-256262
E-mail:ku @ kuvempu.ac.in

Phone No - 08282-256149
Website:www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯಕಾ ರ್ಯಾಲಯ, ಕುವೆಂಪು ಶತಮಾನೋತ್ಸವ ಭವನ, ಜ್ಞಾನ ಸಹ್ಯಾದ್ರಿ,
ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

ಸಂಖ್ಯೆ:ಕುವಿ:ಶೈವಿ:ಎಸಿ–5: 2336 :2018–19

ದಿನಾಂಕ:04–07–2018

## ಸುತ್ತೋಲೆ

**ವಿಷಯ: 2018–19ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ 2 ಮತ್ತು 3ನೇ ವರ್ಷದ ಪ್ರವೇಶಾತಿಗೆ ದಿನಾಂಕ ವಿಸ್ತರಿಸುವ ಕುರಿತು.**

ಉಲ್ಲೇಖ:1. ವಿಶ್ವವಿದ್ಯಾಲಯದ ಸುತ್ತೋಲೆ ಸಂಖ್ಯೆ:ಕುವಿ:ಶೈವಿ:ಎಸಿ–5:767: 2018–19 ದಿನಾಂಕ:14/18–05–2018

2. ಕೆಲವು ಕಾಲೇಜುಗಳ ಪ್ರಾಂಶುಪಾಲರ ಮನವಿ.
3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:04–07–2018

****

ವಿಶ್ವವಿದ್ಯಾಲಯದ ವ್ಯಾಪ್ತಿಯ ಸ್ನಾತಕ ಪದವಿ ಕಾಲೇಜುಗಳಿಗೆ 2018–19ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿಗೆ ಸಂಬಂಧಿಸಿದಂತೆ ಈಗಾಗಲೇ ಪೂರ್ಣ ವಿವರಗಳೊಂದಿಗೆ ಉಲ್ಲೇಖ (1)ರ ಸುತ್ತೋಲೆಯನ್ನು ಹೊರಡಿಸಲಾಗಿದೆ. ಮತ್ತು 2 ಮತ್ತು 3ನೇ ವರ್ಷದ ಪ್ರವೇಶಾತಿಗೆ ₹. 200/- ಗಳ ದಂಡ ಶುಲ್ಕದೊಂದಿಗೆ ಕಡೆಯ ದಿನಾಂಕ:03–07–2018 ನಿಗದಿಪಡಿಸಲಾಗಿರುತ್ತದೆ.

ಈ ಕುರಿತಂತೆ ಕೆಲವು ಕಾಲೇಜುಗಳ ಪ್ರಾಂಶುಪಾಲರುಗಳು ದೂರವಾಣಿ ಮೂಲಕ ಮನವಿಯನ್ನು ಸಲ್ಲಿಸಿ, ಕೆಲವು ವಿದ್ಯಾರ್ಥಿಗಳು ಕಾರಣಾಂತರಗಳಿಂದ ಪ್ರವೇಶಾತಿಗೆ ತಡವಾಗಿ ಬರುತ್ತಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2 ಮತ್ತು 3ನೇ ವರ್ಷದ ಪ್ರವೇಶಾತಿಗೆ ಅಂತಿಮ ದಿನಾಂಕವನ್ನು ವಿಸ್ತರಿಸುವಂತೆ ಕೋರಿರುತ್ತಾರೆ.

ಪ್ರಾಂಶುಪಾಲರುಗಳ ಕೋರಿಕೆ ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2ನೇ ವರ್ಷದ (3ನೇ ಸೆಮಿಸ್ಟರ್) ಮತ್ತು 3ನೇ ವರ್ಷದ (5ನೇ ಸೆಮಿಸ್ಟರ್) ವರ್ಷದ ಪ್ರವೇಶಾತಿಗೆ ₹. 300/- ಗಳ ದಂಡ ಶುಲ್ಕದೊಂದಿಗೆ ಕಡೆಯ ದಿನಾಂಕ: **10–07–2018** ರವರೆಗೆ ವಿಸ್ತರಿಸಲಾಗಿದೆ. ಇದು ಅಂತಿಮವಾಗಿದ್ದು ನಂತರದಲ್ಲಿ ಪ್ರವೇಶಾತಿಯ ಅವಧಿಯನ್ನು ವಿಸ್ತರಿಸಲಾಗುವುದಿಲ್ಲ. ಸದರಿ ಅಂಶವನ್ನು ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ಸೂಚಿಸಲಾಗಿದೆ.

ಉಳಿದಂತೆ ಉಲ್ಲೇಖ (1)ರ ಸುತ್ತೋಲೆಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಮಾನ್ಯ ಕುಲಸಚಿವರ ಅನುಮೋದನೆಯಾಗಿದೆ

(ಡಾ. ಧರಣಿಕುಮಾರ್ ಪಿ.)
ಉಪ ಕುಲಸಚಿವ
ಶೈಕ್ಷಣಿಕ ವಿಭಾಗ,
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ-577451
ಶಿವಮೊಗ್ಗ ಜಿಲ್ಲೆ.

ಗೆ,

ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಶಿವಮೊಗ್ಗ/ ಚಿಕ್ಕಮಗಳೂರು ಜಿಲ್ಲೆಯ ಎಲ್ಲಾ ಸ್ನಾತಕ ಪದವಿಗಳ ಸಂಯೋಜಿತ/ ಘಟಕ/ ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿಗಳು:

1. ಆಪ್ತ ಸಹಾಯಕರು, ಕುಲಪತಿಗಳು: ಕುಲಸಚಿವರು:ಕುಲಸಚಿವರು(ಪರೀಕ್ಷಾಂಗ): ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ರಕ್ಷಣಾ ಕಡತ.
3. ಕಛೇರಿ ಪ್ರತಿ.